ದಿನಾಂಕ 09.10.2025 ರಂದು ಸಾಕ್ಷಿಗೆ ಪ್ರಮಾಣ ವಚನ ಮಾಡಿಸಿದೆ.

ಮುಂದುವರೆದ **ಮುಖ್ಯ ವಿಚಾರಣೆಃ-** ವಾದಿ ಪರ ಶ್ರಿ. ಎಂ.ಆರ್.ಎಸ್ ವಕೀಲ **ರಿಂದ**

ನಾನು ದಾಖಲೆಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ನನ್ನ ಪರವಾಗಿ ನಿಶಾನೆಗಳನ್ನಾಗಿ ಗುರುತಿಸಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

1. ದಿನಾಂಕ 24.06.2024 ರಂದು ಪ್ರತಿವಾದಿಗಳು ಬರೆದುಕೊಟ್ಟ ಒಪ್ಪಿಗೆ ಪತ್ರವನ್ನು ನಿಪಿ-10 ಎಂದು ಗರುತಿಸಲಾಯಿತು. ನಿಪಿ-10 ಕ್ಕೆ ಪ್ರತಿವಾದಿಗಳು ತಮ್ಮ ಹೆಬ್ಬೆಟ್ಟಿನ ಗುರುತು ಮತ್ತು ಸಹಿ ಮಾಡಿರುತ್ತಾರೆ. ಸಾಕ್ಷಿಯು ಅವುಗಳನ್ನು ನೋಡಿ ಗುರುತಿಸಿದ್ದು 1 ನೇ ಪ್ರತಿವಾದಿಯ ಸಹಿಯನ್ನು ನಿಪಿ-10 ಎ ಎಂದು, 2 ನೇ ಪ್ರತಿವಾದಿಯ ಸಹಿಯನ್ನು ನಿಪಿ-10 ಬಿ ಎಂದು, 3 ನೇ ಪ್ರತಿವಾದಿಯ ಸಹಿಯನ್ನು ನಿಪಿ-10 ಸಿ ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-10 ಡಿ ಎಂದು ಗುರುತಿಸಲಾಯಿತು.

ಈ ಎಲ್ಲಾ ಕಾರಣಗಳಿಂದ ನಾನು ಸಲ್ಲಿಸಿರುವ ದಾವೆಯನ್ನು ಡಿಕ್ರಿ ಮಾಡಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

ಪಾಟೀ ಸವಾಲುಃ ಪ್ರತಿವಾದಿಗಳು ಲಿಖಿತ ಹೇಳಿಕೆಯನ್ನು ಸಲ್ಲಿಸಿಲ್ಲದ ಕಾರಣ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)

ಸಾಕ್ಷಿಗೆ ಓದಿ ಹೇಳಿ ಕೇಳಿ ಸರಿ ಇದೆ.

(ದೇವರಾಜು ಹೆಚ್.ಆರ್)
1 ನೇ ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ ಕೆ.ಆರ್.ಪೇಟೆ.